ಸಮಾಚಾರ ಸಣ್ಣದಲ್ಲ

6 ನವಿಲುಗಳು ಸಾವು

ನೆಲಮಂಗಲ: ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲದಲ್ಲಿ ರಾಷ್ಟ್ರಪಕ್ಷಿ 6 ನವಿಲುಗಳು ಸಾವನ್ನಪ್ಪಿರುವಂತಹ ಘಟನೆ ನಡೆದಿದೆ. ಬಿಲಾಲ್ ನಗರದ ತೋಟದ ಶೆಡ್ ಬಳಿ ಒಂದೇ ಜಾಗದಲ್ಲಿ ಆರು ನವಿಲುಗಳ ಕಳೇಬರ ಪತ್ತೆಯಾಗಿದೆ. ನವಿಲುಗಳಿಗೆ ವಿಷ ಪ್ರಾಶನಮಾಡಿ ಕೊಂದಿರುವ ಶಂಕೆ ವ್ಯಕ್ತವಾಗಿದೆ. ನೆಲಮಂಗಲ ಅರಣ್ಯ ಇಲಾಖೆ ಸಿಬ್ಬಂದಿಗೆ ಸ್ಥಳೀಯರು ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ನೆಲಮಂಗಲ ಟೌನ್ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ.

ಭಾರತೀಯರಿಗೆ ವಿದೇಶ ಶಿಕ್ಷಣದತ್ತ ಒಲವು

ಬೆಂಗಳೂರು: ಭಾರತೀಯ ವಿದ್ಯಾರ್ಥಿಗಳು ತಮ್ಮ ಜಾಗತಿಕ ಶಿಕ್ಷಣದ ಪರಿಧಿಯನ್ನು ವಿಸ್ತರಿಸುತ್ತಿದ್ದಾರೆ ಮತ್ತು ಸ್ಪೇನ್, ಜರ್ಮನಿ, ಫ್ರಾನ್ಸ್, ಸಿಂಗಾಪುರ, ಯುಎಇ, ನ್ಯೂಜಿಲೆಂಡ್ ಮತ್ತು ದಕ್ಷಿಣ ಕೊರಿಯಾದಂತಹ ಉದಯೋನ್ಮುಖ ಶಿಕ್ಷಣ ತಾಣಗಳನ್ನು ಹೆಚ್ಚಾಗಿ ಆರಿಸಿಕೊಳ್ಳುತ್ತಿದ್ದಾರೆ. ಯುಎಸ್ಎ, ಕೆನಡಾ, ಯುನೈಟೆಡ್ ಕಿಂಗ್ಡಮ್ ಮತ್ತು ಆಸ್ಟ್ರೇಲಿಯಾದಂತಹ ಇಂಗ್ಲಿಷ್ ಭಾಷಾ ತಾಣಗಳು ಹೆಚ್ಚು ಅಪೇಕ್ಷಣೀಯವಾಗಿ ಉಳಿದಿದ್ದರೂ, ವಿಶೇಷವಾಗಿ ಸ್ಟೆಮ್ ಕೋರ್ಸ್‌ಗಳಿಗಾಗಿ ಯುಎಸ್ಎ ಮತ್ತು ಭಾರತೀಯ ವಿದ್ಯಾರ್ಥಿಗಳು ಈಗ ತಮ್ಮ ಆಯ್ಕೆಗಳನ್ನು ಸಕ್ರಿಯವಾಗಿ ವೈವಿಧ್ಯಗೊಳಿಸುತ್ತಿದ್ದಾರೆ. ಈ ಬದಲಾವಣೆಯು ಶಿಕ್ಷಣದ ಒಟ್ಟಾರೆ ವೆಚ್ಚ, ಸಂಸ್ಥೆಗಳ ಗುಣಮಟ್ಟ, ವೀಸಾ ಮಾನದಂಡಗಳು, ಇಂಟರ್‌ಶಿಪ್ ಮತ್ತು ಉದ್ಯೋಗಾವಕಾಶಗಳು ಮತ್ತು ವಿದ್ಯಾರ್ಥಿಗಳ ಸುರಕ್ಷತೆಯಂತಹ ಅಂಶಗಳಿಂದ ಪ್ರಭಾವಿತವಾಗಿದೆ. ಬೋಧನಾ ಶುಲ್ಕ, ಪ್ರಯಾಣ, ವಸತಿ, ಲ್ಯಾಪ್ ಟಾಪ್, ಅಧ್ಯಯನ ಸಾಮಗ್ರಿಗಳು ಮತ್ತು ಜೀವನ ವೆಚ್ಚಗಳ ಸಂಪೂರ್ಣ ವೆಚ್ಚವನ್ನು ಒಳಗೊಂಡಿರುವ ಹಣಕಾಸು ಪರಿಹಾರಗಳನ್ನು ಆಕ್ಸಿಲೋ ನೀಡುತ್ತದೆ. ಇಲ್ಲಿಯವರೆಗೆ, ಆಕ್ಸಿಲೋ 30 ಕ್ಕೂ ಹೆಚ್ಚು ದೇಶಗಳ 1,600 ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳಲ್ಲಿ 18,000 ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಶಿಕ್ಷಣ ಹಣಕಾಸು ಒದಗಿಸಿದೆ.

ಭ್ರಷ್ಟಾಚಾರ ಆರೋಪ ಸಿಬಿಐ ತನಿಖೆಗೆ ಆಗ್ರಹ

ಬೆಂಗಳೂರು: ಸಮಾಜ ಕಲ್ಯಾಣ ಇಲಾಖೆಯ ಅಧೀನ ಸಂಸ್ಥೆಯಾದ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದಲ್ಲಿ ಎಸ್‌ಸಿಪಿ/ಟಿಎಸ್‌ಪಿ ನಿಧಿಯಲ್ಲಿ ಭ್ರಷ್ಟಾಚಾರ ಆರೋಪ ಕೇಳೀ ಬಂದಿದ್ದು, ಈ ಬಗ್ಗೆ ಸಿಬಿಐ ತನಿಖೆ ನಡೆಸಬೇಕು ಎಂದು ಭೀಮಪುತ್ರಿ ಬ್ರಿಗೇಡ್ ಸಂಸ್ಥಾಪಕಿ ರೇವತಿ ರಾಜ್ ಆಗ್ರಹಿಸಿದ್ದಾರೆ. ಈ ಎಲ್ಲಾ ಅಕ್ರಮಗಳಿಗೆ ಇಂದಿರಾ ಗಾಂಧಿ ವೃತ್ತಿ ಅಭಿವೃದ್ಧಿ ಕೇಂದ್ರದ ಉನ್ನತಾಧಿಕಾರಿಗಳು ಕಾರಣಕರ್ತರಾಗಿದ್ದು, ಇವರನ್ನು ಕೂಡಲೇ ಅಮಾನತ್ತಿನಲ್ಲಿಟ್ಟು, ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು. ಎಲ್ಲಾ ಗುತ್ತಿಗೆಗಳಲ್ಲಿ ಶೇ.40 ರಷ್ಟು ಕಮೀಷನ್ ಪಡೆಯುತ್ತಿದ್ದು, ಕೆಟಿಪಿಪಿ ಕಾಯಿದೆ ಗಂಭೀರವಾಗಿ ಉಲ್ಲಂಘಿಸಲಾಗಿದೆ. ಅಧಿಕಾರಿಗಳ ಕುಟುಂಬದ ಎಲ್ಲಾ ಬ್ಯಾಂಕ್ ಖಾತೆಯನ್ನು ತಕ್ಷಣವೇ ಮುಟ್ಟುಗೋಲು ಹಾಕಿಕೊಳ್ಳಬೇಕು ಎಂದು ಆಗ್ರಹಿಸಿದರು. ಅಧಿಕಾರಿಗಳ ವಿರುದ್ಧ ರಾಜ್ಯದ ಮುಖ್ಯ ಕಾರ್ಯದರ್ಶಿ, ಸಮಾಜ ಕಲ್ಯಾಣ ಸಚಿವರು, ಇಲಾಖಾ ಆಯುಕ್ತರಿಗೆದೂರು ನೀಡಲಾಗಿದೆ ಎಂದು ತಿಳಿಸಿದರು.

ವಿಶ್ವವಾಣಿ ಪುರವಣಿ ವಿಭಾಗದ ಮುಖ್ಯಸ್ಥ ಶಶಿಧರ ಹಾಲಾಡಿ ಅವರಿಗೆ ದ್ವಾರನಕುಂಟೆ ಪಾತಣ್ಣ ಕಾದಂಬರಿ ಪ್ರಶಸ್ತಿ ಪುರಸ್ಕಾರ

ನದಿ ದಾಟಿ ಬಂದವರು ಬದಲಾವಣೆಗಳನ್ನು ವಿಶ್ಲೇಷಿಸುವ ಕೃತಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕನ್ನಡ ಸಾಹಿತ್ಯದಲ್ಲಿ ಸಾಮಾಜಿಕ ಹಾಗೂ ರಾಜಕೀಯ ಬದಲಾವಣೆಗಳನ್ನು ವಿಶ್ಲೇಷಿಸುವ ಮಹತ್ವದ ಕೃತಿಯಾಗಿ ಗುರುತಿಸಿಕೊಂಡಿರುವ 'ನದಿ ದಾಟಿ ಬಂದವರು' ಕಾದಂಬರಿಯು ಭಾರತದ ಇತಿಹಾಸದ ಸ್ವಾತಂತ್ರ್ಯ ಪೂರ್ವ ಮತ್ತು ಸ್ವಾತಂತ್ರ್ಯೋತ್ತರ ಕಾಲಘಟ್ಟವನ್ನು ಗಂಭೀರವಾಗಿ ವಿಶ್ಲೇಷಿಸುವ ಕೃತಿ ಎಂದು ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜ್ ತಿಳಿಸಿದರು.

ದ್ವಾರನಕುಂಟೆ ಪಾತಣ್ಣ ಪ್ರತಿಷ್ಠಾನ ವತಿಯಿಂದ ಶನಿವಾರ ಆಯೋಜಿಸಿದ್ದ ದ್ವಾರನಕುಂಟೆ ಪಾತಣ್ಣ ಕಾದಂಬರಿ ಪ್ರಶಸ್ತಿಯನ್ನು ವಿಶ್ವವಾಣಿ ಪುರವಣಿ ವಿಭಾಗದ ಮುಖ್ಯಸ್ಥ ಶಶಿಧರ ಹಾಲಾಡಿ ಅವರಿಗೆ ಪ್ರದಾನ ಮಾಡಿ ಬಳಿಕ ಮಾತನಾಡಿದ ಅವರು, ಕಾದಂಬರಿಯು ಬ್ರಿಟಿಷರ ಆಳ್ವಿಕೆಯಿಂದ ಮುಕ್ತಿಗೊಳ್ಳುವ ಹೋರಾಟದ ಕಾಲಘಟ್ಟವನ್ನು ಹಾಗೂ ಅದರ ನಂತರದ ಸಾಮಾಜಿಕ-ರಾಜಕೀಯ ಬೆಳವಣಿಗೆಗಳನ್ನು ಸಾಹಿತ್ಯದ ಮೂಲಕ ವಿಶ್ಲೇಷಿಸುತ್ತದೆ. ಸ್ವಾತಂತ್ರ್ಯಕ್ಕೂ ಮುನ್ನ ಬ್ರಿಟಿಷರ ವಿರುದ್ಧ ಹೋರಾಟ ನಡೆಸುವ ಸಂದರ್ಭದಲ್ಲಿ ದೇಶದ ವಿವಿಧ ವರ್ಗಗಳ ಜನರು ರಾಷ್ಟ್ರೀಯ ಚಳವಳಿಗೆ ಬೆಂಬಲ ನೀಡಿದ್ದರು. ಆ ಸಮಯದಲ್ಲಿ ಭೂಮಾಲೀಕ ವರ್ಗಗಳು ಹಾಗೂ ಮೇಲಜಾತಿ ಪ್ರಭುತ್ವವಿದ್ದ ಸಮಾಜದ ವರ್ಗಗಳು ಕೂಡ ರಾಷ್ಟ್ರೀಯ ಚಳವಳಿಗೆ ಬೆಂಬಲ ನೀಡಿ, ಬ್ರಿಟಿಷರನ್ನು ದೇಶದಿಂದ ಹೊರಹಾಕುವ ಹೋರಾಟದಲ್ಲಿ ಭಾಗಿಯಾಗಿದ್ದವು ಎಂದರು.

ಈ ಹೋರಾಟದಲ್ಲಿ ಮಹಾತ್ಮ ಗಾಂಧಿ ಪ್ರಮುಖ ನಾಯಕತ್ವ ವಹಿಸಿಕೊಂಡಿದ್ದರು. ಗಾಂಧೀಜಿಯ ನೇತೃತ್ವದಲ್ಲಿ ನಡೆದ ಸ್ವಾತಂತ್ರ್ಯ ಹೋರಾಟಕ್ಕೆ ಸಮಾಜದ ಅನೇಕ ವರ್ಗಗಳು ಬೆಂಬಲ ನೀಡಿದ್ದವು. ಆದರೆ ನಂತರದ ಅವಧಿಯಲ್ಲಿ ಗಾಂಧೀಜಿ ದಲಿತರು, ಶೂದ್ರರು ಮತ್ತು ಮಹಿಳೆಯರ ಹಕ್ಕುಗಳ ಪರವಾಗಿ ಮಾತನಾಡಲು ಆರಂಭಿಸಿದಾಗ ಸಮಾಜದ ಕೆಲವು ಪ್ರಭುತ್ವ ವರ್ಗಗಳಲ್ಲಿ ವಿರೋಧವೂ ವ್ಯಕ್ತವಾಗಲು ಆರಂಭವಾಯಿತು ಎಂಬ ಇತಿಹಾಸದ ವಾಸ್ತವವನ್ನು ಕಾದಂಬರಿ ಸೂಕ್ಷ್ಮವಾಗಿ ತೆರೆದಿಡುತ್ತದೆ. ಕಾದಂಬರಿಯು ಸ್ವಾತಂತ್ರ್ಯ ನಂತರ ದೇಶದಲ್ಲಿ ನಡೆದ ಬದಲಾವಣೆಗಳನ್ನೂ ಸಮಗ್ರವಾಗಿ ಚಿತ್ರಿಸುತ್ತದೆ. ಸ್ವಾತಂತ್ರ್ಯ ನಂತರ ಭಾರತದಲ್ಲಿ ಶಿಕ್ಷಣದ ವಿಸ್ತರಣೆ, ಪ್ರಜಾಪ್ರಭುತ್ವ ವ್ಯವಸ್ಥೆಯ ಬಲವರ್ಧನೆ ಹಾಗೂ ಜನರ ಜೀವನಮಟ್ಟದಲ್ಲಿ ಕಂಡುಬಂದ ಸುಧಾರಣೆಗಳು ದೇಶದ ಅಭಿವೃದ್ಧಿಗೆ ದಾರಿ ಮಾಡಿಕೊಟ್ಟವು. ಆರೋಗ್ಯ, ಶಿಕ್ಷಣ, ಉದ್ಯೋಗ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಜನರಿಗೆ ಹೊಸ ಅವಕಾಶಗಳು ದೊರಕತೊಡಗಿದವು. ಕೈಗಾರಿಕೆಗಳ ಸ್ಥಾಪನೆ, ನೀರಾವರಿ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಮೂಲಕ ದೇಶದಲ್ಲಿ ಪ್ರಗತಿ ಕಂಡುಬಂದಿತು ಎಂದರು.

ಈ ಹಿನ್ನೆಲೆಯಲ್ಲಿಯೇ ಇತಿಹಾಸದ ಈ ಬದಲಾವಣೆಗಳನ್ನು ಮರೆತಿರುವ ಚಾರಿತ್ರಿಕ ವಿಸ್ಮೃತಿಯೇ ಇಂದಿನ ಸಮಾಜದಲ್ಲಿ ರಾಜಕೀಯ ಹಾಗೂ ಕೋಮು ಸಂಘರ್ಷಗಳಿಗೆ ಕಾರಣವಾಗುತ್ತಿದೆ ಎಂಬ ಅಂಶವನ್ನು ಕಾದಂಬರಿ ಬಲವಾಗಿ ವ್ಯಕ್ತಪಡಿಸುತ್ತದೆ. ದೇಶದ ಸ್ವಾತಂತ್ರ್ಯ ಹೋರಾಟದಿಂದ ಹಿಡಿದು ನಂತರದ ಸಾಮಾಜಿಕ ನ್ಯಾಯ ಚಳುವಳಿಗಳವರೆಗೆ ನಡೆದ ಬೆಳವಣಿಗೆಗಳನ್ನು ಅರಿತುಕೊಳ್ಳುವುದು ಸಮಾಜದ ಮುಂದಿನ ಪಥವನ್ನು ನಿರ್ಧರಿಸಲು ಈ ಕಾದಂಬರಿ ಅತ್ಯಂತ ಮುಖ್ಯವಾಗಿದೆ ಎಂದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ಎಲ್.ಎನ್. ಮುಕುಂದರಾಜ್ ಅವರು ನಗರದ ಶೇಷಾದ್ರಿಪುರಂ ಕಾಲೇಜಿನಲ್ಲಿ ಶನಿವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿಶ್ವವಾಣಿ ಪುರವಣಿ ವಿಭಾಗದ ಮುಖ್ಯಸ್ಥ ಶಶಿಧರ ಹಾಲಾಡಿ ಅವರಿಗೆ ದ್ವಾರನಕುಂಟೆ ಪಾತಣ್ಣ ಕಾದಂಬರಿ ಪ್ರಶಸ್ತಿ-2025 ಪ್ರದಾನ ಮಾಡಿ ಗೌರವಿಸಿದರು. ಈ ವೇಳೆ ಹಿರಿಯ ವಿಮರ್ಶಕ ಡಾ. ಎಚ್.ಎಸ್. ರಾಘವೇಂದ್ರ ರಾವ್, ದ್ವಾರನಕುಂಟೆ ಪಾತಣ್ಣ ಪ್ರತಿಷ್ಠಾನದ ಅಧ್ಯಕ್ಷ ಬಿ.ಎಂ. ಹನೀಫ್, ಡಾ. ಎಂ.ಎಸ್. ಆಶಾದೇವಿ, ಡಾ. ಎಚ್.ಎಲ್. ಪುಷ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಕೃಷಿ ಕಾರ್ಮಿಕರ ಬದುಕಿನ ಬದಲಾವಣೆಯ ಚಿತ್ರಣ

ಶಶಿಧರ ಹಾಲಾಡಿ ಅವರು ಮಾತನಾಡಿ, ನದಿ ದಾಟಿ ಬಂದವರು ಕಾದಂಬರಿಯು 1930ರ ದಶಕದಿಂದ 1975ರ ದಶಕದವರೆಗೆ ಕರ್ನಾಟಕದ ಕರಾವಳಿ ಭಾಗದ ಹಳ್ಳಿಗಳ ಸಾಮಾಜಿಕ ಹಾಗೂ ಕೃಷಿ ಕ್ಷೇತ್ರದ ಸ್ಥಿತ್ಯಂತರಗಳನ್ನು ಚಿತ್ರಿಸುತ್ತದೆ. ಕಾದಂಬರಿಯ ನಾಯಕ ವೆಂಕಟಯ್ಯ ದೇಶಕ್ಕೆ ಸ್ವಾತಂತ್ರ್ಯ ಬಂದರೆ ಬಡಜನರು ಮತ್ತು ಕೃಷಿ ಕಾರ್ಮಿಕರ ಜೀವನದಲ್ಲಿ ಬದಲಾವಣೆ ಆಗುತ್ತದೆ ಎಂದು ನಂಬಿದ್ದನು. ಮಹಾತ್ಮ ಗಾಂಧೀಜಿಯವರ ಆಲೋಚನೆಗಳಿಂದ ಪ್ರಭಾವಿತರಾದ ಅವನ ಕನಸುಗಳು ನಂತರ 1970ರ ದಶಕದಲ್ಲಿ ಜಾರಿಗೆ ಬಂದ ಭೂಸುಧಾರಣೆ ಕಾಯ್ದೆಯಿಂದ ಸಾಕಾರವಾದವು. ಈ ಮೂಲಕ ಕೃಷಿ ಕಾರ್ಮಿಕರಿಗೆ ಜಮೀನು ದೊರೆತು ಅವರ ಬದುಕಿನಲ್ಲಿ ಮಹತ್ವದ ಬದಲಾವಣೆ ಕಂಡುಬಂದದ್ದು ಕಾದಂಬರಿಯಲ್ಲಿ ಚಿತ್ರಿಸಲಾಗಿದೆ ಎಂದರು.

ಮಕ್ಕಳ ಕಣ್ಣಿನ ಆರೋಗ್ಯಕ್ಕೆ ಹೊರಾಂಗಣ ಆಟ ಅಗತ್ಯ

ಉತ್ತರ ಕನ್ನಡ: ಹೊರಾಂಗಣ ಆಟಗಳು ಕಣ್ಣಿನ ಆರೋಗ್ಯಕ್ಕೆ ಅತ್ಯಂತ ಉಪಯುಕ್ತ. ಅಧ್ಯಯನ ಪ್ರಕಾರ ಪ್ರಾಥಮಿಕ ಹಂತದದ್ದಾಗಿದ್ದರೂ ಉತ್ತಮ ಫಲಿತಾಂಶಗಳನ್ನು ತೋರಿಸಿದೆ. ಮುಂದಿನ 6 ರಿಂದ 12 ತಿಂಗಳ ನಿಯಂತ್ರಿತ ಅಧ್ಯಯನದ ಮೂಲಕ ಇನ್ನಷ್ಟು ಸ್ಪಷ್ಟ ಫಲಿತಾಂಶಗಳನ್ನು ಗಮನಿಸಬಹುದು ಎಂದು ಎಂ.ಎಂ.ಜೋಶಿ ಗಣೇಶ ನೇತ್ರಾಲಯದ ಸಂಸ್ಥಾಪಕ ಡಾ.ಶಿವರಾಮ ಕೆ.ವಿ. ತಿಳಿಸಿದರು.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪುರನ ಸಿದ್ದಿ ವಿನಾಯಕ ಹೈಸ್ಕೂಲ್ ಆವರಣದಲ್ಲಿ ಥ್ರೋಬಾಲ್ ಮೂಲಕ ರಿಫ್ಲೆಕ್ಸಾಲಜಿ ಹಾಗೂ ದೈಹಿಕ ಚಟುವಟಿಕೆಗಳ ಪ್ರಭಾವ - ಕಣ್ಣಿನ ಆರೋಗ್ಯ, ಶೈಕ್ಷಣಿಕ ಸಾಧನೆ ಮತ್ತು ದೈಹಿಕ ಕ್ಷೇಮ ಕುರಿತು ಸಂಶೋಧನಾ ಅಧ್ಯಯನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಪ್ರತಿ ದಿನ ಕನಿಷ್ಠ 30 ನಿಮಿಷಗಳ ಕಾಲ ಹೊರಾಂಗಣ ಆಟಗಳಲ್ಲಿ ಭಾಗವಹಿಸುವುದು ಮಕ್ಕಳ ಆರೋಗ್ಯಕ್ಕೆ ಅಗತ್ಯ. ಆಟಗಳು ಬೌದ್ಧಿಕ ಸಾಮರ್ಥ್ಯ, ಭಾವನಾತ್ಮಕ ಸಾಮರ್ಥ್ಯ, ಸಾಮಾಜಿಕ ಸಾಮರ್ಥ್ಯ ಮತ್ತು ಆರೋಗ್ಯ ಸಾಮರ್ಥ್ಯ ಗಳನ್ನೂ ಹೆಚ್ಚಿಸುತ್ತವೆ ಎಂದರು.

ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆ ಮತ್ತು ಕ್ಷೇಮಕ್ಕಾಗಿ ಥ್ರೋಬಾಲ್ ಆಟದ ವೈಜ್ಞಾನಿಕ ಪ್ರಯೋಜನಗಳನ್ನು ಬಳಸಿಕೊಂಡು ಸಂಯೋಜಿತ ವಿಧಾನವನ್ನು ರೂಪಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು. ಇದರ ಮೂಲಕ ದೈಹಿಕ ಅಭಿವೃದ್ಧಿ, ಮೆದುಳಿನ ಎರಡು ಭಾಗಗಳ ಚಟುವಟಿಕೆ, ಮಾನಸಿಕ ಸ್ಥಿರತೆ, ಕಣ್ಣಿನ ಆರೋಗ್ಯ ಮತ್ತು ಒಟ್ಟು ಜ್ಞಾನಾತ್ಮಕ ಬೆಳವಣಿಗೆಯಲ್ಲಿ ಸುಧಾರಣೆ ಕಂಡುಬರುತ್ತದೆ ಎಂದು ಅಧ್ಯಯನ ತಿಳಿಸಿದೆ. ಒಟ್ಟು 467 ವಿದ್ಯಾರ್ಥಿಗಳಲ್ಲಿ ಕಣ್ಣಿನ ಸಮಸ್ಯೆ ಹೊಂದಿದ್ದ ವಿದ್ಯಾರ್ಥಿಗಳು 43, ಆ 43 ವಿದ್ಯಾರ್ಥಿಗಳಲ್ಲಿ 25 ವಿದ್ಯಾರ್ಥಿಗಳು (ಶೇ.58.1) ಕನಿಷ್ಠ ಒಂದು ಕಣ್ಣಿನಲ್ಲಿ ಸುಧಾರಣೆ, 8 ವಿದ್ಯಾರ್ಥಿಗಳು (ಶೇ. 18.6%) ಎರಡೂ ಕಣ್ಣುಗಳಲ್ಲಿ ಸುಧಾರಣೆ ಕಂಡಿದ್ದಾರೆ. 36-48 ದಿನಗಳ ಕಾಲ ಥ್ರೋಬಾಲ್ ಆಡಿದ ವಿದ್ಯಾರ್ಥಿಗಳಲ್ಲಿ ಶೇ. 84 ವಿದ್ಯಾರ್ಥಿಗಳಿಗೆ ಕನಿಷ್ಠ ಒಂದು ಕಣ್ಣಿನಲ್ಲಿ ಸುಧಾರಣೆ ಕಂಡುಬಂದಿದೆ ಎಂದರು.

ಮದುವೆ ಆಗುವ ಆಸೆ ತೋರಿಸಿ ಪ್ರಿಯತಮೆಯ ಹತ್ಯೆ: ಬಂಧನ

ಬೆಂಗಳೂರು: ಕೊಡಗಿನ ಪುಟ್ಟ ಹಳ್ಳಿಯೊಂದರಲ್ಲಿ ನೆಮ್ಮದಿಯ ಜೀವನ ನಡೆಸುತ್ತಿದ್ದ 23 ವರ್ಷದ ಯುವತಿಯೊಬ್ಬಳನ್ನು ಮದುವೆಯಾಗುವ ಆಸೆ ತೋರಿಸಿ ಬೆಂಗಳೂರಿಗೆ ಕರೆತಂದು ಅಮಾನುಷವಾಗಿ ಕೊಲೆ ಮಾಡಿರುವ ಘಟನೆ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಪ್ರಿಯಕರನೇ ಕುತ್ತಿಗೆ ಬಿಗಿದು ಕೊಲೆ ಮಾಡಿ, ಬಳಿಕ ಅದನ್ನು ಆತ್ಮಹತ್ಯೆ ಎಂದು ಬಿಂಬಿಸಲು ಯತ್ನಿಸಿ ಪೊಲೀಸರ ಅತಿಥಿಯಾಗಿದ್ದಾನೆ. ಸಹ ಜೀವನದಲ್ಲಿ (ಲಿವಿಂಗ್ ರಿಲೇಶನ್‌ಶಿಪ್) ಶುರುವಾದ ಇವರ ಸಂಬಂಧ ಭೀಕರ ಕೊಲೆಯಲ್ಲಿ ಅಂತ್ಯ ಕಂಡಿದೆ. ಮೂಲತಃ ಕೊಡಗಿನವರಾದ ಅಯ್ಯಪ್ಪ ಹಾಗೂ ರಂಜಿತಾ ಈ ದುರಂತ ಪ್ರಕರಣದ ಪ್ರಮುಖರು. ಆರೋಪಿ ಅಯ್ಯಪ್ಪನಿಗೆ ಈ ಮೊದಲೇ ವಿವಾಹವಾಗಿದ್ದು, ಪತ್ನಿಯಿಂದ ದೂರವಿದ್ದ. ಇದೇ ವೇಳೆ ತನ್ನದೇ ಊರಿನ ಅನ್ಯ ಜಾತಿಯ ಯುವತಿ ರಂಜಿತಾಳ ಮೇಲೆ ಕಣ್ಣು ಹಾಕಿದ್ದ ಆತ, ಆಕೆಯನ್ನು ಪ್ರೀತಿಸುವ ನಾಟಕವಾಡಿದ್ದ. ಆಕೆಯನ್ನು ಮದುವೆಯಾಗುವುದಾಗಿ ನಂಬಿಸಿ, ಯುವತಿಯ ಪೋಷಕರಿಗೂ ಮಾತು ಕೊಟ್ಟು ಒಪ್ಪಿಸಿದ್ದ. ತದನಂತರ ಆಕೆಯನ್ನು ತನ್ನೊಂದಿಗೆ ಬೆಂಗಳೂರಿಗೆ ಕರೆತಂದು ಬಾಡಿಗೆ ಮನೆಯೊಂದರಲ್ಲಿ ಇರಿಸಿಕೊಂಡಿದ್ದ. ಬೆಂಗಳೂರಿನ ವರ್ತೂರು ಪೊಲೀಸ್ ಠಾಣಾ ವ್ಯಾಪ್ತಿಯ ಬಾಡಿಗೆ ಮನೆಯೊಂದರಲ್ಲಿ ಇಬ್ಬರೂ ಕೆಲವು ತಿಂಗಳುಗಳಿಂದ ಒಟ್ಟಿಗೆ ವಾಸವಿದ್ದರು. ಆರಂಭದಲ್ಲಿ ಚೆನ್ನಾಗಿಯೇ ಇದ್ದ ಇವರ ಸಂಬಂಧದಲ್ಲಿ ಇತ್ತೀಚೆಗೆ ಬಿರುಕು ಮೂಡಿತ್ತು. ಇವರಿಬ್ಬರ ನಡುವೆ ಆಗಾಗ್ಗೆ ಜಗಳಗಳು ನಡೆಯುತ್ತಿದ್ದವು ಎನ್ನಲಾಗಿದೆ. ಸಾವಿಗೂ ಕೆಲವೇ ದಿನಗಳ ಮುನ್ನ ತನ್ನ ಪೋಷಕರಿಗೆ ಕರೆ ಮಾಡಿದ್ದ ರಂಜಿತಾ, ಅಯ್ಯಪ್ಪ ತನ್ನ ಮೇಲೆ ಹಲ್ಲೆ ನಡೆಸುತ್ತಿರುವುದಾಗಿ ಅಳಲು ತೋಡಿಕೊಂಡಿದ್ದಳು. ಅಷ್ಟೇ ಅಲ್ಲದೆ, ಆತ ತನಗೆ ಜಾತಿ ನಿಂದನೆ ಮಾಡುತ್ತಿದ್ದಾನೆ ಎಂಬ ಗಂಭೀರ ಆರೋಪವನ್ನೂ ಮಾಡಿದ್ದಳು ಎಂದು ಆಕೆಯ ಪೋಷಕರು ದೂರಿನಲ್ಲಿ ವಿವರಿಸಿದ್ದಾರೆ.

ಕೇಬಲ್ ವೈರ್‌ನಿಂದ ಕುತ್ತಿಗೆ ಬಿಗಿದು ಕೊಲೆ

ಮಗಳು ಕರೆ ಮಾಡಿ ಅಳಲು ತೋಡಿಕೊಂಡ ಎರಡು-ಮೂರು ದಿನಗಳ ಬಳಿಕ, ಅಯ್ಯಪ್ಪನೇ ನೇರವಾಗಿ ರಂಜಿತಾಳ ಪೋಷಕರಿಗೆ ಕರೆ ಮಾಡಿ ನಿಮ್ಮ ಮಗಳು ನೇಣಿಗೆ ಶರಣಾಗಿದ್ದಾಳೆ ಎಂಬ ಸುಳ್ಳು ಕಥೆ ಕಟ್ಟಿದ್ದಾನೆ. ಆತನ ಮಾತುಗಳಿಂದ ಹಾಗೂ ಮಗಳು ಮೊದಲೇ ಹೇಳಿದ್ದ ವಿಚಾರಗಳಿಂದ ತೀವ್ರ ಅನುಮಾನಗೊಂಡ ರಂಜಿತಾಳ ಪೋಷಕರು ತಕ್ಷಣವೇ ವರ್ತೂರು ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಪೋಷಕರ ದೂರಿನ ಆಧಾರದ ಮೇಲೆ ಆರೋಪಿ ಅಯ್ಯಪ್ಪನನ್ನು ವಶಕ್ಕೆ ಪಡೆದು ತೀವ್ರ ವಿಚಾರಣೆ ನಡೆಸಿದಾಗ ಆತ ಸತ್ಯವನ್ನು ಬಾಯಿಬಿಟ್ಟಿದ್ದಾನೆ. ಕೇಬಲ್ ವೈರ್‌ನಿಂದ ರಂಜಿತಾಳ ಕುತ್ತಿಗೆ ಬಿಗಿದು ಬರ್ಬರವಾಗಿ ಕೊಲೆಗೈದಿರುವ ಆತ, ತನ್ನ ಕೃತ್ಯ ಮುಚ್ಚಿಹಾಕಲು ಮೃತದೇಹವನ್ನು ನೇಣುಹಾಕಿ ಆತ್ಮಹತ್ಯೆಯ ರೂಪ ನೀಡಲು ಯತ್ನಿಸಿದ್ದಾನೆ ಎಂಬ ಆಘಾತಕಾರಿ ವಿಚಾರ ತನಿಖೆಯಿಂದ ಬಯಲಾಗಿದೆ.

ಉತ್ತರಹಳ್ಳಿಯ ಕಾಂಗರೂ ಕಿಡ್ಸ್ ಅಂತಾರಾಷ್ಟ್ರೀಯ ಶಾಲೆಯ ವಾರ್ಷಿಕ ಸಮಾರಂಭದಲ್ಲಿ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಎಸ್.ಈ ಸುಧೀಂದ್ರ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಿದರು. ಈ ವೇಳೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಉಪ ಕಾರ್ಯದರ್ಶಿಗಳಾದ ಉಮೇಶ್, ಪ್ರಾರ್ಥನಾ ವಿಶ್ವ ಶಾಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಉಮೇಶ್ ಹೆಗಡೆ, ರಕ್